ಓ ಎಸ್ ನಂಃ 105/2019

ಪಿ. ಡಬ್ಲ್ಯೂ ಃ 1

ದಿಃ 12-09-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಆರ್.ಆರ್ ವಕೀಲರಿಂದ

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.

2 ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಪಿ 1 ಮತ್ತು ನಿ ಪಿ 2 ಎಂದು, ದಿನಾಂಕಃ 23.06.2016 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಪಿ 3 ಎಂದು, ಪ್ರತಿವಾದಿಗೆ ನಮ್ಮ ವಕೀಲರ ಮೂಲಕ ಲೀಗಲ್ ನೋಟೀಸ್ ಕಳುಹಿಸಿದ್ದು ಅದರ ಅಫೀಸ್ ಪ್ರತಿಯನ್ನು ನಿ ಪಿ 4 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ನಿ ಪಿ 5 ಎಂದು, ಪ್ರತಿವಾದಿಯು ಕೊಟ್ಟ ಪ್ರತ್ಯುತ್ತರ ನೋಟೀಸ್ ನ್ನು ನಿ ಪಿ 6 ಎಂದು, ಓ ಎಸ್ 264/2016 ಇದರ ವಾದಪತ್ರದ ದೃಢೀಕೃತ ಪ್ರತಿಯನ್ನು ನಿ ಪಿ 7 ಎಂದು, ಎರಡು ಪತ್ರಿಕಾ ಪ್ರಕಟಣೆಗಳನ್ನು ನಿ ಪಿ 8 ಮತ್ತು ನಿ ಪಿ 9 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗಾಗಿ ವಕೀಲರು ಕಾಲಾವಕಾಶ ಕೋರಿದ್ದು ಮುಂದುವರೆದ ಮುಖ್ಯ ವಿಚಾರಣೆಗಾಗಿ ಮುಂದೂಡಲಾಯಿತು.

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,
ಮಾಗಡಿ.